# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 561(713) |
| ಮಾನ್ಯ ಸದಸ್ಯರ ಹೆಸರು | : | ಡಾ: ವೈ.ಎ.ನಾರಾಯಣಸ್ವಾಮಿ(ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 14.12.2020 |
| ಉತ್ತರಿಸುವ ಸಚಿವರು | : | ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಶಿಕ್ಷಣ ಇಲಾಖೆಯಲ್ಲಿ ಕೆಲಸ ನಿರ್ವಹಿಸುತ್ತಿರುವ ಸರ್ಕಾರಿ/ಅನುದಾನಿತ ಹಾಗೂ ಅನುದಾನ ರಹಿತ ಶಾಲಾ ಶಿಕ್ಷಕರುಗಳಿಗೆ ಆಯುಷ್ಮಾನ್ ಭಾರತ್ ಕಾರ್ಡ್ ರೀತಿಯಲ್ಲಿ ಒಂದು ವಿಶೇಷ ವೈದ್ಯಕೀಯ ಸೌಲಭ್ಯ ಕೊಡಲು ಸರ್ಕಾರ ಚಿಂತಿಸಿದೆಯೇ; | **ಸರ್ಕಾರಿ ಸಿಬ್ಬಂದಿಗಳು:** ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು 1963ರನ್ವಯ ಎಲ್ಲಾ ಸರ್ಕಾರಿ ನೌಕರರು ವೈದ್ಯಕೀಯ ವೆಚ್ಚದ ಮರುಪಾವತಿಗೆ ಅರ್ಹರಿರುತ್ತಾರೆ. |
| ಆ | ಹಾಗಿದ್ದಲ್ಲಿ, ಯಾವ ಶೈಕ್ಷಣಿಕ ವರ್ಷದಿಂದ ಈ ಯೋಜನೆಯನ್ನು ಜಾರಿಗೊಳಿಸಲಾಗುವುದು? | **ಅನುದಾನಿತ ಸಿಬ್ಬಂದಿಗಳು:** ಅನುದಾನಿತ ಶಾಲಾ ಕಾಲೇಜುಗಳ ನೌಕರರು ಕರ್ನಾಟಕ ಶಿಕ್ಷಣ ಅಧಿನಿಯಮ, 1983 ಮತ್ತು ಅದರಡಿ ರಚಿಸಲ್ಪಟ್ಟ ಕರ್ನಾಟಕ ಶಿಕ್ಷಣ ಸಂಸ್ಥೆಗಳ (classification, regulation and prescription of curricula) ನಿಯಮಗಳು, 1995ರ ವ್ಯಾಪ್ತಿಗೆ ಒಳಪಡುತ್ತಾರೆ. ಇವರನ್ನು ಸರ್ಕಾರಿ ನೌಕರರೆಂದು ಪರಿಗಣಿಸಲಾಗುವುದಿಲ್ಲ.<br>ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳು ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು 1963ರ ವ್ಯಾಪ್ತಿಗೆ ಒಳಪಡುವುದಿಲ್ಲ ಹಾಗೂ ಕರ್ನಾಟಕ ಶಿಕ್ಷಣ ಸಂಸ್ಥೆಗಳು( ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳ ನೌಕರರ ನೇಮಕಾತಿ ಹಾಗೂ ಸೇವಾ ಷರತ್ತು ಹಾಗೂ ನಿಬಂಧನೆಗಳು) ನಿಯಮಗಳು 1999ರ ಅನುಬಂಧ-ii (3)ರನ್ವಯ ವೈದ್ಯಕೀಯ ವೆಚ್ಚ ಮರುಪಾವತಿ ಸೌಲಭ್ಯಕ್ಕೂ ಅರ್ಹರಾಗಿರುವುದಿಲ್ಲ. ಆದುದರಿಂದ ವಿಶೇಷ ವೈದ್ಯಕೀಯ ಸೌಲಭ್ಯದ ಪ್ರಶ್ನೆ ಉದ್ಭವಿಸುವುದಿಲ್ಲ.<br>**ಅನುದಾನರಹಿತ ಸಿಬ್ಬಂದಿಗಳು:** ಖಾಸಗಿ ಅನುದಾನ ರಹಿತ ಶಿಕ್ಷಣ ಸಂಸ್ಥೆಗಳಲ್ಲಿನ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳನ್ನು ಆಯಾ ಆಡಳಿತ ಮಂಡಳಿಗಳೇ ನೇಮಕಾತಿ ಮಾಡಿಕೊಂಡಿರುತ್ತಾರೆ. ಸದರಿ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳಿಗೆ ಸೇವಾ ಸೌಲಭ್ಯಗಳಾದ ಸೇವಾ ಪುಸ್ತಕವನ್ನು ತೆರೆಯುವುದು, ವೇತನ ಶ್ರೇಣಿಯ ಕನಿಷ್ಠ ವೇತನವನ್ನು ಬ್ಯಾಂಕ್ ಮೂಲಕ ಪಾವತಿಸುವುದು, ರಜೆ ಸೌಲಭ್ಯ ಮತ್ತಿತರೆ ಸೇವಾ ಭದ್ರತೆಗಳನ್ನು ಒದಗಿಸಲು ಸಂಬಂಧಪಟ್ಟ ಶಿಕ್ಷಣ ಸಂಸ್ಥೆಗಳ ಆಡಳಿತ ಮಂಡಳಿಗಳೇ ನೇರವಾಗಿ ಕ್ರಮ ಕೈಗೊಳ್ಳಬೇಕಾಗುತ್ತದೆ.<br>ಸರ್ಕಾರವು ಅನುದಾನ ರಹಿತ ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ |

| | | |
|---|---|---|
| | | ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳಿಗೆ ಸಂಬಂಧಿಸದಂತೆ ಮೇಲೆ ಹೇಳಿದ ಸೇವಾ ಸೌಲಭ್ಯಗಳನ್ನು ನೀಡಲು ದಿನಾಂಕ: 12.01.2006ರ ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 104 ಎಸ್‌ಇಪಿ 2005ರಲ್ಲಿ ಅವಕಾಶ ಕಲ್ಪಿಸಲಾಗಿದೆ.<br><br>ಮೇಲ್ಕಂಡಂತೆ ಖಾಸಗಿ ಅನುದಾನಿತ /ಅನುದಾನರಹಿತ ಶಾಲಾ ಶಿಕ್ಷಕರುಗಳಿಗೆ ವಿಶೇಷ ವೈದ್ಯಕೀಯ ಸೌಲಭ್ಯದ ಪ್ರಶ್ನೆ ಉದ್ಭವಿಸುವುದಿಲ್ಲ. |

ಸಂ:ಇಪಿ 270 ಎಸ್‌ಇಎಸ್2020

(ಎಸ್. ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು